# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೩<br>Part – III | ಬೆಂಗಳೂರು, ಗುರುವಾರ, ೧೬, ಏಪ್ರಿಲ್, ೨೦೨೬ (ಚೈತ್ರ, ೨೬, ಶಕವರ್ಷ, ೧೯೪೮)<br>BENGALURU, THURSDAY, 16, APRIL, 2026 (CHAITHRA, 26, SHAKAVARSHA, 1948) | ನಂ. ೨೮೮<br>No. 288 |
|---|---|---|

## ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

2ನೇ ಮತ್ತು 3 ನೇ ಮಹಡಿ, ನಂ 16 ಬಳ್ಳಾರಿ ರಸ್ತೆ, ಸದಾಶಿವನಗರ, ಬೆಂಗಳೂರು-560080,

ಇ ಮೇಲ್- sec.karnataka@ka.gov.in ದೂರವಾಣಿ: 080-22205189/93

## ನಡವಳಿಗಳು

ವಿಷಯ : ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿನ ಐದು ನಗರಪಾಲಿಕೆಗಳ ಸಾರ್ವತ್ರಿಕ ಚುನಾವಣೆಗೆ ಭಾವಚಿತ್ರವಿರುವ ಮತದಾರರ ಗುರುತಿನ ಚೀಟಿಯನ್ನು ವಿತರಿಸುವ ಬಗ್ಗೆ.

ಓದಲಾಗಿ: ದಿನಾಂಕ: 10.04.2026 ರಂದು ಮಾನ್ಯ ಆಯುಕ್ತರು, ರಾಜ್ಯ ಚುನಾವಣಾ ಆಯೋಗ, ರವರ ಅಧ್ಯಕ್ಷತೆಯಲ್ಲಿ ಆಯೋಗದ ಅಧಿಕಾರಿಗಳೊಂದಿಗೆ ನಡದ ಸಭೆಯ ನಡವಳಿಗಳು.

-*-*-

ಪ್ರಸ್ತಾವನೆ,

ರಾಜ್ಯ ಚುನಾವಣಾ ಆಯೋಗವು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಐದು ನಗರಪಾಲಿಕೆಗಳ ಮುಂಬರಲಿರುವ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಮತದಾರರ ಪರರೂಪಧಾರಣೆಯನ್ನು ತಡೆಗಟ್ಟಲು ಮತ್ತು ಮತದಾನದ ಸಮಯದಲ್ಲಿ ಅವರನ್ನು ಗುರುತಿಸುವುದನ್ನು ಸುಗಮಗೊಳಿಸುವ ಕಾರಣದಿಂದ ಐದು ನಗರಪಾಲಿಕೆಗಳ ವ್ಯಾಪ್ತಿಯ ಒಟ್ಟು 369 ವಾರ್ಡ್‌ಗಳಲ್ಲಿನ ಎಲ್ಲಾ ಮತದಾರರಿಗೆ ಮತದಾರರ ಗುರುತಿನ ಚೀಟಿಯನ್ನು (Identity Cards) ನೀಡಲು ಉದ್ದೇಶಿಸಿರುತ್ತದೆ.

ಗ್ರೇಟರ್ ಬೆಂಗಳೂರು ಆಡಳಿತ (ಮತದಾರರ ನೋಂದಣಿ) ನಿಯಮಗಳು, 2025ರ ನಿಯಮ 26(1) ರಡಿ ನಿರ್ದಿಷ್ಟಪಡಿಸಿರುವಂತೆ, ರಾಜ್ಯ ಚುನಾವಣಾ ಆಯೋಗವು ಮತದಾರರ ಪರರೂಪಧಾರಣೆಯನ್ನು ತಡೆಗಟ್ಟುವ ಮತ್ತು ಮತದಾನದ ಸಮಯದಲ್ಲಿ ಅವರನ್ನು ಗುರುತಿಸುವುದನ್ನು ಸುಗಮಗೊಳಿಸುವ ಕಾರಣದಿಂದ ರಾಜ್ಯದ ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ನಿಯಮದ ಉಪಬಂಧಗಳು ಅಧಿಸೂಚನೆಯಲ್ಲಿ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ನಿರ್ದಿಷ್ಟಪಡಿಸಬಹುದಾದಂತಹ ಯಾವುದೇ ವಾರ್ಡ್ ಅಥವಾ ಅದರ ಭಾಗಕ್ಕೆ ಅನ್ವಯಿಸುತ್ತವೆ ಎಂದು ನಿರ್ದೇಶಿಸಬಹುದು – ಎಂದು ಉಲ್ಲೇಖಿಸಲಾಗಿರುತ್ತದೆ.

ಆದ್ದರಿಂದ, ರಾಜ್ಯ ಚುನಾವಣಾ ಆಯೋಗವು ಭಾರತ ಸಂವಿಧಾನದ 74ನೇ ತಿದ್ದುಪಡಿಯ ಪರಿಚ್ಛೇಧ 234-ಜಡ್ಎ ಹಾಗೂ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024 ಮತ್ತು ಅದರಡಿ ರಚಿಸಲಾದ ಗ್ರೇಟರ್ ಬೆಂಗಳೂರು ಆಡಳಿತ (ಮತದಾರರ ನೋಂದಣಿ) ನಿಯಮಗಳು, 2025ರ ನಿಯಮ 26(1) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಐದು ನಗರಪಾಲಿಕೆಗಳ ಒಟ್ಟು 369 ವಾರ್ಡ್‌ಗಳ ವ್ಯಾಪ್ತಿಯಲ್ಲಿನ ಪ್ರತಿ ಮತದಾರರಿಗೆ ಮತದಾರರ ಗುರುತಿನ ಚೀಟಿಯನ್ನು ವಿತರಿಸಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:SECK/ULB/GELN(GBA)/15/2026-ULB E- 312289, ದಿನಾಂಕ: 15.04.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರೇಟರ್ ಬೆಂಗಳೂರು ಆಡಳಿತ (ಮತದಾರರ ನೋಂದಣಿ) ನಿಯಮಗಳು, 2025ರ ನಿಯಮ 26ರ ಉಪನಿಯಮ (3)ರಲ್ಲಿನ ಅಂಶಗಳನ್ನು ಒಳಗೊಂಡಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿನ ಐದು ನಗರಪಾಲಿಕೆಗಳ ಒಟ್ಟು 369 ವಾರ್ಡ್‌ಗಳ ವ್ಯಾಪ್ತಿಯಲ್ಲಿನ ಪ್ರತಿ ಮತದಾರರಿಗೆ ಮತದಾರರ ಗುರುತಿನ ಚೀಟಿಯ ಮುದ್ರಣ ಮತ್ತು ವಿತರಣೆ ವ್ಯವಸ್ಥೆಯನ್ನು ರಾಜ್ಯ ಚುನಾವಣಾ ಆಯೋಗದಿಂದ ಮಾಡಿಕೊಳ್ಳಲು ಆದೇಶಿಸಲಾಗಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

(ಅಮರೇಶ್.ಹೆಚ್)
ಕಾರ್ಯದರ್ಶಿಗಳು,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH